◆ **ಅಪ್ಪ?**

ಅಪ್ಪ ಬಾರ್ಕೂರಿನವರು. ಸೀತಾನದಿ ಈಚೆಕಡೆ ಸಾಸ್ತಾನ ಪಾಂಡೇಶ್ವರ. ಆಚೆಕಡೆ ಬಾರ್ಕೂರು. ಬಾರ್ಕೂರಲ್ಲಿ ಅಪ್ಪಯ್ಯನ ತಾಯಿ ಇದ್ದಳು. ಒಡವಿ. ಅಲ್ಲಿ ಚಂದು ಅಂತ ಒಬ್ಬಿದ್ದಳು. ಆಕಿ ಗದ್ದೆಬಯಲು ಕಾಲುಸೇತುವೆ ಹೊಳೆ ದಾಟಿಸಿ ದೋಣಿಯೊಳಗೆ ಬಾರ್ಕೂರು ಮನಿಗೆ ಕರಕೊಂಡು ಹೋಗ್ತಿದ್ದಳು. ಬಾರ್ಕೂರಜ್ಜಿ ಮೊಮ್ಮಕ್ಕಳು ಬಂದಾವಂತ ಅಕ್ಕಿ ತೆಂಗಿನಕಾಯಿ ರುಬ್ಬಿ ಅಪ್ಪಂ ಮಾಡೋಳು. ದೋಣಿಗಂತ ನಾಕಾಣೆ ಕೊಡೋಳು. ಸಾಸ್ತಾನದ ಅಜ್ಜಿಗೆ ನಾವು ಬಾರ್ಕೂರಿಗೆ ಹೋಗೋದು ಇಷ್ಟವಿರಲಿಲ್ಲ. ದುಡ್ಡುಗಿಡ್ಡು ಇದ್ದವರು. ಗತ್ತು ತೋರಿಸೋರು.

◆ **ಸಾಹಿತ್ಯದ ಸಂಪರ್ಕ ಎಲ್ಲಿಂದ ಶುರುವಾಯ್ತು?**

ಅಜ್ಜಯ್ಯ ಕತೆ ಹೇಳ್ತಿದ್ದರು. 'ಚಂದಮಾಮ' ಓದ್ತಿದ್ದಿವಿ. ನಾನು ಐದು ವರ್ಷದವಳಿದ್ದಾಗ, ಹಸಿರ ಎಲೆಮೇಲೆ ಹಿಡಿಕಡ್ಡಿಯಿಂದ ಚುಚ್ಚಿಚುಚ್ಚಿ ಅಜ್ಜಯ್ಯ ಕತೆ ಬರೆದೀನಿ ಓದಿ ಅಂತಿದ್ದೆನಂತ. ನಮ್ಮೂರಿಗೆ ಪಾಂಡೇಶ್ವರ ಹತ್ತರ. ಅಲ್ಲಿ ಪಿ. ಕಾಳಿಂಗರಾಯರ ಚಂದದ ಬಂಗಲೆಯಿತ್ತು. ಅವರು ಹಾಡ್ತಾರಂತ ಗೊತ್ತಿರಲಿಲ್ಲ. ಅವರ ಬಂಗಲೆ ಪಕ್ಕಾನೇ ಲೈಬ್ರರಿ. ಅಲ್ಲಿಂದ ಪದ್ಮಾ ಚಿಕ್ಕಿಗೆ ಕಾದಂಬರಿ ತರತಿದ್ದಿವಿ. ಚಿಕ್ಕಿ ಮಾತ್ರ, 'ಕಾದಂಬರಿ ಹುಚ್ಚಿದ್ದರೆ ಉಪ್ಪರಗಿ ಮೇಲೆ ಹೋಗಿ ಓದಿರಿ' ಅಂತಿದ್ಲು. ನಮ್ಮಜ್ಜಿ ನಮಗ ಕಾದಂಬರಿ ಓದೋಕೆ ಬಿಡ್ತಿದ್ದಿಲ್ಲ, ಮಕ್ಕಳ ತಲೆಕೆಡ್ತದ ಅಂತ. ನಮ್ಮೂರ ಬಾಜೂಕೇ ಕಾರಂತರ ಸಾಲಿಗ್ರಾಮ. ನಮ್ಮನ್ನ ಅಜ್ಜಿ ಅವರ ಮನೀಗೆ ಹೋಗಗೊಡತಿದ್ದಿಲ್ಲ, ಶೆಟ್ಟರನ್ನು ಲಗ್ನ ಆಗಿದ್ದರಲ್ಲ ಅವರು. 'ಕೋಟದ ಕಾಕಿಗಳು' ಅಂತ ಆಡಕೊಳ್ತಿದ್ದಳು.

◆ **ನಿಮ್ಮದೊಂದು ಕಥಾಸಂಕಲನ ಚಿಕ್ಕಿಗೆ ಅರ್ಪಿಸಿದ್ದೀರಿ.**

ನಮ್ಮನ್ನ ಎಲ್ಲ ತರಹದಿಂದ ಬೆಳೆಸಿದೋಳು ಅವಳು. ಆಕಿ ಪತ್ರ ಬರೆಯೋದ ನೋಡಬೇಕು ನೀವು. ಯಾರು ಊರಿಗೆ ಬಂದರು, ಯಾರು ಅಮೆರಿಕಕ್ಕೆ ಹೋದರು, ಯಾರು ಇಂಟರ್‌ಕಾಸ್ಟ್ ಮದುವೆಯಾದರು, ಯಾವ ಅಡಿಗೆ ಮಾಡಿದರು, ಯಾರು ಏನೇನು ತಿಂದರು—ಪ್ರತಿಯೊಂದು ಇಂಚಿಂಚು. ಈ ಫೋನ್ ಬಂದಿಂದೇ ಬರಿಯೋದ್ ಬಿಟ್ಟಳು. ಫೋನಲ್ಲಿ, 'ಮಕ್ಕಳೇ ಸರಿಯಾಗಿ ಮದ್ದು ತಗಳ್ರಿ, ಮಕ್ಕಳೇ ಅಲ್ಲಿಇಲ್ಲಿ ಹೋಗಬೇಡಿ, ಮಕ್ಕಳೇ ಜಾಸ್ತಿ ಸೊಪ್ಪು ತರಕಾರಿ ತಿನ್ರಿ' ಒಂದಾ ಎರಡಾ ಉಪದೇಶ?

◆ **ಬಾಲ್ಯದಲ್ಲಿ ಊರಿನ ಪರಿಸರ ಹೇಗಿತ್ತು?**

ಅಗ್ರಹಾರದಲ್ಲಿ ನಾವು ಬೆಳೆದಿದ್ದು. ನಮ್ಮಜ್ಜಿ ಭಯಂಕರ ಮಡಿ. ಆಕಿ ಟವೆಲ್ ಯಾರೂ ಯೂಸ್ ಮಾಡಂಗಿಲ್ಲ. ಬೆಡ್ ಮ್ಯಾಲ್ ಯಾರೂ ಕೂರಂಗಿಲ್ಲ. ಮುಟ್ಟಾದಾಗ ನಾವು ಬ್ಯಾರೇ ಕೋಣೇನೇ. ಮೂರುಸಲ ಸ್ನಾನ ಮಾಡಬೇಕು—ಅದೆಲ್ಲ ಕರಾರಿತ್ತು. ನಮಗ ಹುಡುಗರ ಜೋಡಿ ಆಟ ಆಡೋಕೆ, ಹಾಡಿ ಅಲೆಯೋಕೆ ಆಸೆ. ಆದರೆ ಅಜ್ಜಿ, 'ಅಲ್ಲೆಲ್ಲ ಉಡಾಳ ಗಂಡುಮಕ್ಕಳು ಇರ್ತಾವ, ನೀವ್ ಹೋಗಬ್ಯಾಡ್ರಿ, ಗಂಡಮಕ್ಕಳ ಜತೆ ಕೂಡಬ್ಯಾಡ್ರಿ, ಮೈಕೈ ಮುಟ್ತಾರ' ಅಂತಿದ್ಲು. ನಾವು ಮುದ್ದಾಂ ಹೋಗಿ ಹುಡುಗರ ಜತಿ ಆಟ ಆಡತಿದ್ವಿ. ಮೈಕೈ ಮುಟ್ಟಿದರ ಏನಾತು ಅಂತಿದ್ವಿ.

◆ **ಬಾಲ್ಯದ ನೆನಪುಗಳು ಕಾಡತಾವಾ?**

ಬಾಲ್ಯ ಅನ್ನೋದು ಎಷ್ಟು ಸಿಹಿಯಾಗಿರ್ತದ! ಊರುಬಿಟ್ಟು ಅರವತ್ತು ವರ್ಷವಾದರೂ